**All India Radio: Bangalore**
**Regional Bulletin In Kannada**
**04.01.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು :

1. ಕರ್ನಾಟಕ ಚಿತ್ರಕಲಾ ಪರಿಷತ್ತು ಆವರಣದಲ್ಲಿ ೨೩ನೇ ಚಿತ್ರಸಂತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ
2. ಬೆಂಗಳೂರಿನಲ್ಲಿಂದು 'ಏರೋನಾಟಿಕ್ಸ್ ೨೦೪೭' ವಿಚಾರ ಸಂಕಿರಣ ಉದ್ಘಾಟಿಸಿದ ಭಾರತೀಯ ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್
3. ಬಳ್ಳಾರಿ ಗುಂಡಿನ ದಾಳಿ ಪ್ರಕರಣ: ಕಠಿಣ ಕ್ರಮಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಗ್ರಹ
4. ಇದೇ ೭ರಂದು ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಉದ್ಘಾಟನೆ

<><><><>

ಕಲೆ ರಾಜ್ಯದ ಸಂಸ್ಕೃತಿಯ ಕನ್ನಡಿ. ಕಲಾವಿದರು, ಕಲಾಸಕ್ತರಿಗೆ ಚಿತ್ರಸಂತೆ ವೇದಿಕೆ ಕಲ್ಪಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕ ಚಿತ್ರಕಲಾ ಪರಿಷತ್ತು ವತಿಯಿಂದ ಬೆಂಗಳೂರಿನ ಕುಮಾರ ಕೃಪಾ ರಸ್ತೆಯಲ್ಲಿರುವ ಕರ್ನಾಟಕ ಚಿತ್ರಕಲಾ ಪರಿಷತ್ತು ಆವರಣದಲ್ಲಿ ಇಂದು ಆಯೋಜಿಸಲಾಗಿದ್ದ ೨೩ನೇ ಚಿತ್ರಸಂತೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿ ಜಿಲ್ಲೆಯಲ್ಲಿಯೂ ಸಾಧಕರ ವಸ್ತುಸಂಗ್ರಹಾಲಯಕ್ಕೆ ಬೇಡಿಕೆಯಿದ್ದು, ಸರ್ಕಾರ ಅದನ್ನು ಸಕಾರಾತ್ಮಕವಾಗಿ ಸ್ವೀಕಾರ ಮಾಡಲಿದೆ ಎಂದರು. ಈ ಬಾರಿಯ ಚಿತ್ರ ಸಂತೆಯ ಧ್ಯೇಯ ವಾಕ್ಯ ಪರಿಸರಕ್ಕೆ ಸಮರ್ಪಿಸಲಾಗಿದೆ. ಪರಿಸರವನ್ನು ನಾವು ರಕ್ಷಿಸಿದರೆ, ಅದು ನಮ್ಮನ್ನು ರಕ್ಷಿಸುತ್ತದೆ. ಅದಕ್ಕಾಗಿ ಪರಿಸರದ ಬಗ್ಗೆ ಜ್ಞಾನ ಅಗತ್ಯ. ಈ ಕುರಿತು ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದರು. ಬೆಂಗಳೂರು ಸೇರಿದಂತೆ ದೇಶದ ಅನೇಕ ರಾಜಧಾನಿಗಳಲ್ಲಿ ಪರಿಸರ ಮಾಲಿನ್ಯ ಹೆಚ್ಚಾಗಿದ್ದು, ದೆಹಲಿಯಲ್ಲಿ ಬದುಕಲು ಸಾಧ್ಯವಿಲ್ಲದ ವಾತಾವರಣ ನಿರ್ಮಾಣವಾಗುತ್ತಿದೆ. ಪರಿಸರದ ರಕ್ಷಣೆ ಇಂದಿನ ಅಗತ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದರು.

<><><><>

ವೈಮಾನಿಕ ಅಭಿವೃದ್ಧಿ ಸಂಸ್ಥೆ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ 'ಏರೋನಾಟಿಕ್ಸ್ ೨೦೪೭' ಇಂದಿನಿಂದ ಬೆಂಗಳೂರಿನ ಸೆಂಟರ್ ಫಾರ್ ಏರ್‌ಬೋರ್ನ್ ಸಿಸ್ಟಮ್ಸ್‌ನಲ್ಲಿ ಪ್ರಾರಂಭವಾಗಿದೆ. ಈ ವಿಚಾರ ಸಂಕಿರಣವನ್ನು ಭಾರತೀಯ ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಲಘು ಯುದ್ಧ ವಿಮಾನ ತೇಜಸ್ ಹಾರಾಟದ ೨೫ ವರ್ಷಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ವೈಮಾನಿಕ ಅಭಿವೃದ್ಧಿ ಸಂಸ್ಥೆಯನ್ನು ಅಭಿನಂದಿಸಿದರು. ನಿರಂತರವಾಗಿ ವಿಕಸನಗೊಳ್ಳುತ್ತಿರುವ ಇಂದಿನ ಕಾಲಘಟ್ಟದಲ್ಲಿ ಭಾರತೀಯ ವಾಯುಪಡೆಯನ್ನು ಯಾವುದೇ ಸಂದರ್ಭದಲ್ಲಿ ಕಾರ್ಯಾಚರಣೆಗೆ ಸಿದ್ಧವಾಗುವಂತೆ ರೂಪಿಸಬೇಕಿದೆ ಎಂದು ಅವರು ಹೇಳಿದರು.

<><><><>

ಪ್ರತಿಯೊಬ್ಬರಿಗೂ ಕೂಡ ಆರ್ಥಿಕವಾಗಿ ಮತ್ತು ಸಾಮಾಜಿಕ ನ್ಯಾಯ ದೊರೆತಾಗ ಮಾತ್ರ ಸಮಾನತೆ ಕಾಣಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ಇಂದು ದೇವಾಂಗ ಸಂಘದಿಂದ್ದ ಏರ್ಪಡಿಸಿದ್ದ ಸಂಘದ ಶತಮಾನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೇಶದಲ್ಲಿ ಪ್ರತಿಯೊಬ್ಬರಿಗೂ ಆರ್ಥಿಕ ಮತ್ತು ಸಾಮಾಜಿಕವಾಗಿ ನ್ಯಾಯ ದೊರೆತಾಗ ಮಾತ್ರ ಮುಖ್ಯವಾಹಿನಿಗೆ ಬರಲು ಸಾಧ್ಯ. ೧೨ನೇ ಶತಮಾನದಲ್ಲೇ ಜಾತಿ ಪದ್ಧತಿ ನಶಿಸಬೇಕೆಂದು ಬಸವಾದಿ ಶರಣರು ಪ್ರಯತ್ನಿಸಿದರು ಎಂದು ಅವರು ಹೇಳಿದರು.

<><><><>

ರಾಜ್ಯ ಸರ್ಕಾರ ತನ್ನ ಶಾಸಕರನ್ನು ರಕ್ಷಿಸಲು ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಂಡಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಕಾರ್ಯಕರ್ತರ ಸೋಗಿನಲ್ಲಿ ನಕಲಿ ಗನ್‌ಮ್ಯಾನ್‌ಗಳು ಇರುವುದು ಗಾಂಧಿ ತತ್ವಗಳಿಗೆ ವಿರುದ್ಧವಾಗಿದೆ. ಒಂದು ವೇಳೆ ಜನಾರ್ದನ ರೆಡ್ಡಿ ತಪ್ಪು ಮಾಡಿದ್ದರೆ, ಅದನ್ನು ತನಿಖೆ ಮಾಡಲು ಪೊಲೀಸ್ ಇಲಾಖೆ ಇದೆ. ಆದರೆ

ಜನರನ್ನು ಕರೆತಂದು ಗಲಾಟೆ ಸೃಷ್ಟಿಸಿದ ಶಾಸಕ ಭರತ್ ರೆಡ್ಡಿ ವಿರುದ್ಧ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಏಕೆ ಎಂದು ಪ್ರಶ್ನಿಸಿದರು. ಈ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು. ಇನ್ನೊಂದೆಡೆ, ಯಲ್ಲಾಪುರದಲ್ಲಿ ನಡೆದ ಹತ್ಯೆ ಪ್ರಕರಣ ನಿಜಕ್ಕೂ ನೋವು ತಂದಿದೆ. ಇಂತಹ ಪ್ರಕರಣಗಳಲ್ಲಿ ಯಾವುದೇ ಜಾತಿ, ಧರ್ಮವನ್ನು ನೋಡದೆ, ಆರೋಪಿಗಳ ವಿರುದ್ಧ ಕಠಿಣ ಕ್ರಮವಾಗಬೇಕು ಹಾಗೂ ಇದರ ಸಂಪೂರ್ಣ ತನಿಖೆಯಾಗಬೇಕು ಎಂದು ಸಚಿವ ಪ್ರಹ್ಲಾದ್ ಜೋಶಿ ಆಗ್ರಹಿಸಿದರು.

<><><><>

ಹಾವೇರಿ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದ್ದ ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ-ಹಿಮ್ಸ್ ನಿರ್ಮಾಣಕ್ಕೆ ೫೦೦ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ೭ರಂದು ಹಿಮ್ಸ್ ಉದ್ಘಾಟನೆ ಮಾಡಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಹಾವೇರಿ ಹೊರವಲಯದ ದೇವಗಿರಿ ರಸ್ತೆಯಲ್ಲಿರುವ ಹಿಮ್ಸ್ ಸಭಾಭವನದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಮ್ಸ್‌ನಲ್ಲಿ ೨೦೨೨ರಿಂದಲೇ ಎಂಬಿಬಿಎಸ್ ತರಗತಿಗಳು ಶುರುವಾಗಿವೆ. ಈಗ ಮೂರನೇ ವರ್ಷದ ವಿದ್ಯಾರ್ಥಿಗಳಿದ್ದಾರೆ. ಗಣ್ಯರ ಸಮಯ ಸಿಗದಿದ್ದರಿಂದ, ಉದ್ಘಾಟನೆಯನ್ನು ಪದೇ ಪದೆ ಮುಂದೂಡಲಾಗಿತ್ತು. ಈಗ ಎಲ್ಲರ ಒಪ್ಪಿಗೆ ಪಡೆದು, ದಿನಾಂಕ ನಿಗದಿಪಡಿಸಲಾಗಿದೆ. ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದ ಬಸವರಾಜ ಬೊಮ್ಮಾಯಿ, ಶಾಸಕರು ಹಾಗೂ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು. ರಾಜ್ಯದಲ್ಲಿ ಹಾವೇರಿ ಸೇರಿದಂತೆ ಚಿಕ್ಕಬಳ್ಳಾಪುರ, ಚಿಕ್ಕಮಗಳೂರು ಹಾಗೂ ಯಾದಗಿರಿಯಲ್ಲಿ ಹೊಸದಾಗಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳು ಆರಂಭವಾಗಿವೆ. ಈ ಸಂಸ್ಥೆಗಳ ಪೈಕಿ ಹಾವೇರಿ ಹಿಮ್ಸ್, ಪ್ರಗತಿಯಲ್ಲಿ ಮೊದಲ ಸ್ಥಾನದಲ್ಲಿದೆ ಎಂದು ಸಚಿವ ಶಿವಾನಂದ ಪಾಟೀಲ ತಿಳಿಸಿದರು.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ವಿವಿಧ ನ್ಯಾಯಾಲಯಗಳಲ್ಲಿ ವಿಶೇಷ ಮಧ್ಯಸ್ಥಿಕೆ ಅಭಿಯಾನ ೨.೦ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಸಾರ್ವಜನಿಕರು ಈ ಅಭಿಯಾನವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶ ಟಿ.ಪಿ.ರಾಮಲಿಂಗೇಗೌಡ ಮನವಿ ಮಾಡಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಜಿಲ್ಲೆಯಲ್ಲಿಯೂ ಇದೇ ೨ ರಿಂದ ೯೦ ದಿನಗಳ ಕಾಲ ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಚೆಕ್ ಅಮಾನ್ಯ, ಕೌಟುಂಬಿಕ ದೌರ್ಜನ್ಯ, ಅಪಘಾತ, ವಾಣಿಜ್ಯ ವಿವಾದ, ಸೇವಾ ವಿಷಯ, ಸಾಲ ವಸೂಲಾತಿ, ಭೂಸ್ವಾಧೀನ ಪ್ರಕರಣಗಳು ಸೇರಿದಂತೆ ಸೂಕ್ತ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಅಭಿಯಾನದಲ್ಲಿ ಕೈಗೆತ್ತಿಕೊಳ್ಳಲು ಅವಕಾಶವಿದೆ ಎಂದು ನ್ಯಾಯಾಧೀಶ ಟಿ.ಪಿ.ರಾಮಲಿಂಗೇಗೌಡ ತಿಳಿಸಿದ್ದಾರೆ.

<><><><>

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಸಾಲೂರು ಗ್ರಾಮದಲ್ಲಿ ಜಾತ್ರಾಮಹೋತ್ಸವ ಜರುಗಿತು. ಗ್ರಾಮ ದೇವತೆಯಾದ ಬನಶಂಕರಿ ತಾಯಿಯ ಜಾತ್ರೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಸೇರಿ ಸಂಭ್ರಮಿಸಿದರು. ಜಾತ್ರೆಯ ಪ್ರಯುಕ್ತ ಕಳೆದ ದಿನ ಸಂಜೆ ನಡೆದ ರಥೋತ್ಸವದಲ್ಲಿ ಭಾಗಿಯಾದ ಜನರು, ತೇರನ್ನು ಎಳೆದು ಪುನೀತರಾದರು. ಸಾಲೂರು ಗ್ರಾಮದ ಪ್ರಮುಖ ಬೀದಿಯಲ್ಲಿ ರಥೋತ್ಸವ ನಡೆಯಿತು.

<><><><>

ಬೀದಿನಾಯಿಗಳ ನಿರ್ವಹಣೆಗೆ ವೈಜ್ಞಾನಿಕ ಹಾಗೂ ಮಾನವೀಯ ಕ್ರಮಗಳನ್ನು ಜಾರಿಗೊಳಿಸುವಂತೆ ಆಗ್ರಹಿಸಿ, ಇಂದು ಮಂಗಳೂರಿನಲ್ಲಿ ಅಖಿಲ ಭಾರತ ಪ್ರಾಣಿ ಕಲ್ಯಾಣ ಸಂಘಟನೆಗಳು ಹಾಗೂ ಪ್ರಾಣಿಪ್ರಿಯರಿಂದ ಮೌನ ಪ್ರತಿಭಟನೆ ನಡೆಯಿತು. ಮಂಗಳೂರು ನಗರದಲ್ಲಿ ೨೫ ಸಾವಿರಕ್ಕೂ ಅಧಿಕ ಬೀದಿ ನಾಯಿಗಳಿವೆ. ಆದರೆ ಒಂದೇ ಅನಿಮಲ್ ಬರ್ತ್ ಕಂಟ್ರೋಲ್- ಎಬಿಸಿ ಕೇಂದ್ರವಿದೆ. ಸರ್ಕಾರ ತಕ್ಷಣವೇ ನಗರ ಸೇರಿದಂತೆ ಎಲ್ಲೆಡೆ ಹೆಚ್ಚಿನ ಎಬಿಸಿ ಕೇಂದ್ರಗಳನ್ನು ಸ್ಥಾಪಿಸಬೇಕು ಎಂದು ಅನಿಮಲ್ ಕೇರ್ ಟ್ರಸ್ಟ್‌ನ ಟ್ರಸ್ಟಿ ಸುಮಾ ನಾಯಕ್ ಆಗ್ರಹಿಸಿದ್ದಾರೆ. ಬೀದಿ ನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ನೀಡಿ, ಲಸಿಕೆ ಹಾಕಿ, ಅದೇ ಪ್ರದೇಶಕ್ಕೆ ಮರಳಿಸುವುದೇ ದೀರ್ಘಕಾಲೀನ

ಪರಿಹಾರವಾಗಿದೆ. ನಾಯಿಗಳನ್ನು ಏಕಾಏಕಿ ಹಿಡಿದು, ಶೆಲ್ಟರ್‌ಗಳಿಗೆ ಸೇರಿಸಿ, ನಾಲ್ಕು ವಾರಗಳ ಕಾಲ ಸರ್ವೆ ನಡೆಸುವಂತೆ ನೀಡಿರುವ ನಿರ್ದೇಶನ ಪ್ರಾಯೋಗಿಕವಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಕರಾವಳಿಯ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸುವ ಕೆಲಸವನ್ನು ಯಕ್ಷಗಾನ ಮಾಡಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನ ಅಡ್ಯಾರ್ ಸಹ್ಯಾದ್ರಿ ಕಾಲೇಜು ಆವರಣದಲ್ಲಿಂದು ಯಕ್ಷಧ್ರುವ ಪಟ್ಲ ಫೌಂಡೇಶನ್ ಘಟಕಗಳ ಸಹಯೋಗದೊಂದಿಗೆ ಯಕ್ಷಧ್ರುವ-ಯಕ್ಷ ಶಿಕ್ಷಣ ಯೋಜನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕರಾವಳಿಯಲ್ಲಿ ಕಲೆ ಮತ್ತು ಸಂಸ್ಕೃತಿ ದೊಡ್ಡ ಪಾತ್ರವನ್ನು ವಹಿಸಿದೆ ಎಂದರು. ಯಕ್ಷಗಾನ ಇಂದು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡಿದೆ. ಯಕ್ಷಗಾನಕ್ಕೆ ದೀರ್ಘ ಇತಿಹಾಸ ಇದೆ. ದೇಶ ಉಳಿಯಬೇಕಾದರೆ, ನಮ್ಮ ಸಂಸ್ಕೃತಿ ಬೆಳೆಯಬೇಕು ಎಂದು ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>